# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಜೂನ್ 2016 ರಿಂದ ಫೆಬ್ರವರಿ 2017ರವರೆಗೆ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಹಾಗೂ ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದ ವರೆಗೆ ಮುಂದುವರೆಸುವ ಬಗ್ಗೆ.

**ಓದಲಾಗಿದೆ** ಸರ್ಕಾರದ ಆದೇಶ ಸಂಖ್ಯೆ ಇಡಿ .64 ಎಸ್‌ಟಿಬಿ 2013, ದಿನಾಂಕ:25.06.2014.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ 2014-15ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಮುಂದುವರೆಸಿದಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಅನುವಾಗುವುದೆಂಬ ಉದ್ದೇಶದಿಂದ ಅವರುಗಳ ಸೇವೆಯನ್ನು ಕೆಲವೊಂದು ಷರತ್ತುಗಳನ್ನು ವಿಧಿಸಿ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸಲು ಅನುಮತಿ ನೀಡಲಾಗಿತ್ತು.

ಪ್ರಸ್ತುತ 2016-17ನೇ ಸಲಿನಲ್ಲಿ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಸಹ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಹಲವಾರು ಶಿಕ್ಷಕರು ಮತ್ತು ಉಪನ್ಯಾಸಕರು ವಯೋನಿವೃತ್ತಿಯಾಗಲಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪಠ ಪ್ರವಚನಗಳು ಸುಸೂತ್ರವಾಗಿ ನಡೆಯಲು ಅನುವಾಗುವಂತೆ 2016-17ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಜೂನ್ 2016 ರಿಂದ ಫೆಬ್ರವರಿ 2017ರವರೆಗೆ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಅಂದರೆ ಮಾರ್ಚ್ 2017ರವರೆಗೆ ಮುಂದುವರೆಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಇಡಿ 73 ಎಸ್‌ಟಿಬಿ 2016, ಬೆಂಗಳೂರು, ದಿನಾಂಕ:25.06.2016

ಪ್ರಸ್ತಾವನೆಯಲ್ಲಿ ವಿವರಿಸುವಂತೆ 2016-17ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಜೂನ್ 2016 ರಿಂದ ಫೆಬ್ರವರಿ 2017ರವರೆಗೆ ವಯೋನಿವೃತ್ತರಾಗಲಿರುವ ಸುಮಾರು 3500 ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲಾ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರನ್ನು ದಿ:31.03.2017ರವರೆಗೆ ಸೇವೆಯಲ್ಲಿ ಮುಂದುವರೆಸಲು, ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ಅನುಮತಿ ನೀಡಲಾಗಿದೆ

1) ಈ ರೀತಿ ನೇಮಕಗೊಂಡವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 313(ಬಿ)ರ ಪ್ರಕಾರ ವೇತನವನ್ನು ನಿಗಧಿಪಡಿಸತಕ್ಕದ್ದು.

2) ಶೈಕ್ಷಣಿಕ ವರ್ಷದ ಪ್ರಾರಂಭದ ನಂತರ ಅಂದರೆ ಜೂನ್ –2016ರ ತಿಂಗಳಿನಿಂದ ಫೆಬ್ರವರಿ 2017ರ ತಿಂಗಳ ಅಂತ್ಯದವರೆಗೆ ನಿವೃತ್ತರಾಗುವ ಶಿಕ್ಷಕರು/ಉಪನ್ಯಾಸಕರಿಗೆ (ಮಾರ್ಚ್ 2017ರ ತಿಂಗಳವರೆಗೆ ಕಾರ್ಯ ನಿರ್ವಹಿಸಲು) ಮಾತ್ರ ಅನ್ವಯವಾಗತಕ್ಕದ್ದು.

3) ಒಂದು ವೇಳೆ ನೇಮಕಾತಿ ಪ್ರಕ್ರಿಯೆಯು ಅಂತಿಮಗೊಂಡು ಹೊಸ ಶಿಕ್ಷಕರು/ಉಪನ್ಯಾಸಕರು ನೇಮಕಗೊಂಡಲ್ಲಿ ಇಂತಹ ನೇಮಕಾತಿ ತಾನೇ ತಾನಾಗಿ ರದ್ದುಗೊಳ್ಳತಕ್ಕದ್ದು.

4) ಕಾರ್ಯ ಭಾರ ಇರುವ ಹುದ್ದೆಯೆದುರು ಮಾತ್ರ ಮುಂದುವರೆಸತಕ್ಕದ್ದು. ಹಾಗೂ ತಾಲ್ಲೂಕಿನಲ್ಲಿ ಹೆಚ್ಚುವರಿ ಶಿಕ್ಷಕರು ಲಭ್ಯವಿದೆಯೇ ಎಂಬ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ದೃಢೀಕರಿಸಿದ ನಂತರವಷ್ಟೇ ಅನುಮತಿಸಬೇಕು.

ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನಿವೃತ್ತಿ ನಂತರ ಮುಂದುವರೆಸುವ ಶಿಕ್ಷಕರಿಗೆ ಗೌರವ ಸಂಭಾವನೆ ಪಾವತಿಸಲು ಬೇಕಾಗುವ ಜಿಲ್ಲಾವಾರು ಅನುದಾನದ ವಿವರಗಳನ್ನು ಒದಗಿಸಿದರೆ, ಲೆಕ್ಕಶೀರ್ಷಿಕೆ 2515–00–197–0–10–300(Lumpsum)ರಡಿಯಲ್ಲಿ ಕಾಯ್ದಿರಿಸಿಕೊಂಡಿರುವ ರೂ.60.25 ಕೋಟಿಗಳ ಅನುದಾನದಿಂದ ಜಿಲ್ಲೆಗಳಿಗೆ ನೇರವಾಗಿ ಅನುದಾನ ಬಿಡುಗಡೆ ಮಾಡಲಾಗುವುದೆಂದು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ನಂತರ ಮುಂದುವರೆಸುವ ಉಪನ್ಯಾಸಕರಿಗೆ ಗೌರವ ಸಂಭಾವನೆಯನ್ನು ಲೆಕ್ಕಶೀರ್ಷಿಕೆ 2202–02–109–0–13–059ರಡಿ ಒದಗಿಸಿರುವ ರೂ.10.74ಕೋಟಿಗಳ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 341 ವೆಚ್ಚ–8/2016. ದಿನಾಂಕ:13.06.2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
25/6/16
(ವಿ.ರಾಮಕೃಷ್ಣಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ (ಸಾಮಾನ್ಯ)(ಪ್ರ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಇವರಿಗೆ:–

1) ಮಹಾಲೇಖಪಾಲರು,(ಎ&ಇ) ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ/ ಧಾರವಾಡ
4) ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
5) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
6) ರಾಜ್ಯ ಹುಜೂರು, ಖಜಾನೆ, ಬೆಂಗಳೂರು
7) ಮಾಹಿತಿ ಕೇಂದ್ರ ಶಿಕ್ಷಣ ಇಲಾಖೆ.
8) ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.